# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: ~~23~~ 22 :2021-22 ದಿನಾಂಕ: 18.09.2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ದಾಸರಹಳ್ಳಿ ವಲಯದ ಬಾಗಲುಗುಂಟೆ ವಾರ್ಡ್ ನಂ.14 ರಲ್ಲಿ ದಿನಾಂಕ: 18.09.2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.**

**ಸಭೆಗೆ ಹಾಜರಾಗಿದ್ದವರ ವಿವರಗಳು:-**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಕೆ.ಮರುಳಸಿದ್ದಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ. ಡಾ॥ ವರುಣ್ | ಕೋವಿಡ್ ಮೆಡಿಕಲ್ ಆಫೀಸರ್ ಬಾಗಲುಗುಂಟೆ, ಪ್ರಾಥಮಿಕ ಆರೋಗ್ಯ ಕೇಂದ್ರ |
| 3 | ಶ್ರೀ. ಅಮರ್‌ನಾಥ್ | ಸಹಾಯಕ ಅಭಿಯಂತರರು, ಬೃಹತ್ ಮಳೆ ನೀರು ಗಾಲುವೆ, ದಾಸರಹಳ್ಳಿ ವಲಯ |
| 4 | ಶ್ರೀ. ಪಂಚಾಕ್ಷರಯ್ಯ | ಹೆಡ್ ಕಾನ್‌ಸ್ಟೇಬಲ್, ಬಾಗಲುಗುಂಟೆ ಪೊಲೀಸ್ ಠಾಣೆ. |
| 5 | ಶ್ರೀಮತಿ.ಚೈತ್ರ ಎಂ | ಕಿರಿಯ ಆರೋಗ್ಯ ನಿರೀಕ್ಷಕರು |
| 6 | ಶ್ರೀ.ಮಂಜುನಾಥ್ | ವಾಟರ್ ಇನ್ಸ್‌ಪೆಕ್ಟರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ ಬಾಗಲಗುಂಟೆ |
| 7 | ಶ್ರೀ.ರವಿಕುಮಾರ್ | ವಾಟರ್ ಇನ್ಸ್‌ಪೆಕ್ಟರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ ಬಾಗಲಗುಂಟೆ |
| 8 | ಶ್ರೀ ಮಹಾದೇವಯ್ಯ | ತೋಟಗಾರಿಕೆ ವಿಭಾಗ ದಾಸರಹಳ್ಳಿ ವಲಯ. |
| 9 | ಶ್ರೀ.ಪುಟ್ಟರಾಜು | ಕಿರಿಯ ಅಭಿಯಂತರರು, ಬೆಸ್ಕಾಂ |
| 10 | ಶ್ರೀ.ರಮೇಶ್ | ಬೀದಿ ದೀಪಗಳ ನಿರ್ವಹಣೆ |
| 11 | ಶ್ರೀ. ಬಿ.ಟಿ. ಲಕ್ಷ್ಮೀವೆಂಕಟೇಶ್ | ಮುನಿಕೊಂಡಪ್ಪ ಬಡಾವಣೆ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ |
| 12 | ಶ್ರೀ. ಟಿ.ವಿ ಮಹದೇವಯ್ಯ | ಕುವೆಂಪುನಗರ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ |
| 13 | ಶ್ರೀ.ಕೃಷ್ಣಮೂರ್ತಿ | ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ |
| 14 | ಶ್ರೀ.ಸದಾಶಿವ | ನಾಗರೀಕ ಹಿತ ರಕ್ಷಣಾ ಸಮಿತಿ, ಎಂ.ಇ.ಐ ಬಡಾವಣೆ |
| 15 | ಶ್ರೀ.ಮೂಡಲಗಿರಿಯಪ್ಪ | ಅಧ್ಯಕ್ಷರು, ಸೌಂದರ್ಯನಗರ ಕ್ಷೇಮಾಭಿವೃದ್ಧಿ ಸಂಘ |
| 16 | ಶ್ರೀ.ಮುದ್ದಹನುಮೇಗೌಡ | ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು, ಸಿಡೇದಹಳ್ಳಿ |
| 17 | ಶ್ರೀ. ಗಿರೀಶ್. ಎಂ | ನಾಗರೀಕ ಹಿತ ರಕ್ಷಣಾ ಸಮಿತಿ ಸಿದ್ದೇಶ್ವರ ಬಡಾವಣೆ. |
| 18 | ಶ್ರೀ. ರಾಮೇಗೌಡ | ನಾಗರೀಕ ಹಿತ ರಕ್ಷಣಾ ಸಮಿತಿ ಭುವನೇಶ್ವರಿನಗರ. |

ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆದ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

- **ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಪಟ್ಟ ವಿಷಯದ ಬಗ್ಗೆ**

ಬಾಗಲಗುಂಟೆ ವಾರ್ಡ್ ವ್ಯಾಪ್ತಿಯ 110 ಹಳ್ಳಿಗಳ ಪೈಕಿ ಸಿಡ್ಡೇದ ಹಳ್ಳಿ 1ನೇ ಮುಖ್ಯ ರಸ್ತೆ, 1ನೇ ಅಡ್ಡ ರಸ್ತೆಯಲ್ಲಿ ಕಾವೇರಿ ನೀರಿನ ಕೊಳವೆಗಳನ್ನು ಅಳವಡಿಸದೆ ಇರುವ ಬಗ್ಗೆ, ನೀರಿನ ವಾಲ್ವ್‌ಗಳನ್ನು ಅಸಮರ್ಪಕವಾಗಿ ಅಳವಡಿಸಿರುವುದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗಿರುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ವಾರ್ಡ್ ಸಮಿತಿಯ ಗಮನಕ್ಕೆ ತಂದರು. ಶ್ರೀ. ಯತೀಶ್ ಎಂಬುವರು ತಮ್ಮ ಮನೆಯ ಹತ್ತಿರ ಸರಿಯಾಗಿ ಮ್ಯಾನ್ ಹೋಲ್ ಅಳವಡಿಸದೇ ಇರುವ ಬಗ್ಗೆ ಹಾಗೂ ಈ ಕುರಿತು ಹಲವಾರು ಬಾರಿ ಸಂಬಂಧಪಟ್ಟವರ ಗಮನಕ್ಕೆ ತಂದಿದ್ದರು ಸಹ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯಿಂದ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಎಂದು ತಿಳಿಸಿದರು ಮತ್ತು ಬಿ.ಡಬ್ಲ್ಯೂ.ಎಸ್.ಎಸ್.ಬಿ ಯ ಜವಾಬ್ದಾರಿಯನ್ನು ಅಭಿಯಂತರರು/ ಅಧಿಕಾರಿಗಳು ಸಭೆಗಳಿಗೆ ಹಾಜರಾದವರ ಬಗ್ಗೆ ಸದರಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಿದ ನಂತರ ಕೂಡಲೇ ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸುವಂತೆ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯ ಅಧಿಕಾರಿಗಳು/ ಪ್ರತಿನಿಧಿಗಳಿಗೆ ಸೂಚಿಸಲಾಯಿತು.

ಕ್ರಮ : ಸ.ಕಾ.ನಿ.ಅ/ಸ.ಅ (ಬಿ.ಡಬ್ಲ್ಯೂ.ಎಸ್.ಎಸ್.ಬಿ
ಹಾಗೂ ಸ.ಅ ವಾ-14)

- **ಕೋವಿಡ್-19 ಸಾಂಕ್ರಾಮಿಕ ರೋಗದ ನಿಯಂತ್ರಣದ ಕುರಿತು**

ಕೋವಿಡ್-19 ಮೆಡಿಕಲ್ ಅಫೀಸರ್ ಬಾಗಲುಗುಂಟೆ, ಪ್ರಾಥಮಿಕ ಆರೋಗ್ಯ ಕೇಂದ್ರ ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಬಾಗಲಗುಂಟೆ ವಾರ್ಡ್ ನಂ.14ರ ವ್ಯಾಪ್ತಿಯಲ್ಲಿ

| | |
|---|---|
| ಒಟ್ಟು ಪ್ರಕಟಣೆಗಳು | 7308 |
| ಬಿಡುಗಡೆಯಾದ ಪ್ರಕಟಣೆಗಳು | 7157 |
| ಸಕ್ರಿಯ ಪ್ರಕಟಣೆಗಳು | 12 |
| ಮರಣ | 139 |

ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ವ್ಯಾಪಕವಾಗಿ ಕೋವಿಡ್ ಪರೀಕ್ಷಾ ಸಂಬಂಧ, ಪ್ರತೀ ನಿತ್ಯ ಮನೆಗಳಿಗೆ ಭೇಟಿ ನೀಡಿ ಕೋವೀಡ್ ಪರೀಕ್ಷೆಯನ್ನು ನಡೆಸುತ್ತಿದ್ದಾರೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿನ ಲಸಿಕಾ ಕಾರ್ಯಕ್ರಮದ ಬಗ್ಗೆ ಆರೋಗ್ಯ ವೈದ್ಯಾಧಿಕಾರಿಗಳು ಸಭೆಯಲ್ಲಿ ವಿವರಿಸಿದರು.

ಕ್ರಮ : ಆರೋಗ್ಯ ವೈದ್ಯಾಧಿಕಾರಿಗಳು/
ಹಿರಿಯ ಆರೋಗ್ಯ ಪರಿವೀಕ್ಷಕರು

- **ಘನ ತ್ಯಾಜ್ಯ ನಿರ್ವಹಣೆ ಬಗ್ಗೆ**

ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಅಸಮರ್ಪಕವಾಗಿರುವ ಬಗ್ಗೆ ವಾರ್ಡ್ ಸಮಿತಿ ಸಮಿತಿ ಸದಸ್ಯರು ತಮ್ಮ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಈ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಘನತ್ಯಾಜ್ಯ ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸಂಬಂಧಿಸಿದಂತೆ, ಪಿಪಿಪಿ ಮಾದರಿಯಲ್ಲಿ ಲೋಕಲ್ ಕೋ-ಆರ್ಡಿನೇಟರ್, ಶುಚಿ ಮಿತ್ರ, ಲೇನ್ ವಾಲೆಂಟಿಯರ್ಸ್‌ಗಳನ್ನು ನಿಯೋಜನೆ ಕೊಂಡು ನಿರ್ವಹಿಸುವುದಾಗಿ ಸಭೆಗೆ ತಿಳಿಸಿದರು.

ಸದರಿ ವಿಷಯದ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ಮಾತನಾಡಿ ಈ ಹಿಂದಿನ ಸಭೆಯಲ್ಲಿ ಸದರಿ ವಿಷಯದ ಬಗ್ಗೆ ಈಗಾಗಲೇ ಚರ್ಚಿಸಿದ್ದು ಈವರೆವಿರೂ ಅಗತ್ಯ ಕ್ರಮ ವಹಿಸದರುವ ಬಗ್ಗೆ ತಮ್ಮ ಅಸಮದಾನವನ್ನು ವ್ಯಕ್ತಪಡಿಸಿದರು. ವಾರ್ಡ್ ವಾಪ್ತಿಯಲ್ಲಿ ಅಸಮರ್ಪಕ ಕಸ ವಿಲೇವಾರಿ ಬಗ್ಗೆ ವ್ಯಾಪಕವಾಗಿ ದೂರುಗಳು ಬರುತ್ತಿದ್ದು. ಈ ಬಗ್ಗೆ ಅಧ್ಯತೆಯ ಮೇಲೆ ಕ್ರಮ ವಹಿಸುವಂತೆ ಸೂಚಿಸಿದರು.

ಕ್ರಮ : ಸ.ಕಾ.ನಿ.ಅ (ಘ.ತ್ಯಾ.ನಿ)/ಹಿರಿಯ/
ಕಿರಿಯ ಆರೋಗ್ಯ ನಿರೀಕ್ಷಕರು

- <u>ಬೃಹತ್ ಮಳೆ ನೀರುಗಾಲುವೆ ಬಗ್ಗೆ</u>

ಬಾಗಲುಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ಬೃಹತ್ ಮಳೆನೀರು ಗಾಲುವೆ ಕೈಗೊಂಡಿರುವ ಕಾಮಗಾರಿಗಳ ಕುರಿತು ಚರ್ಚಿಸಲಾಯಿತು. ವಾರ್ಡ್ ಸಮಿತಿ ಸದಸ್ಯರು ಬಾಗಲುಗುಂಟೆ ವ್ಯಾಪ್ತಿಯಲ್ಲಿ 5 ಕಲ್‌ವರ್ಟ್ ಗಳು ಮಂಜೂರಾಗಿದ್ದು ಈವಗೆ ಎರಡು ಕಲ್‌ವರ್ಟ್ ಮಾತ್ರ ನಿರ್ಮಿಸಿರುವುದಾಗಿ ಹಾಗೂ ರಾಜಕಾಲುವೆ ಸಂಖ್ಯೆ 233ಎ ಒತ್ತುವರಿಯ ಬಗ್ಗೆ ಸಭೆಯ ಗಮನಕ್ಕೆ ತಂದರು. ಬೃಹತ್ ಮಳೆನೀರು ಗಾಲುವೆಯ ಅಭಿಯಂತರರು ಮಾತನಾಡಿ ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ವಹಿಸುವುದಾಗಿ ಮತ್ತು ದಾಸರಹಳ್ಳಿ ವಲಯಕ್ಕೆ ಸಂಬಂಧಿಸಿದಂತೆ ಕಾಮಗಾರಿಗಳಿಗೆ ಅನುದಾನದ ಕೊರತೆಯ ಕುರಿತು ತಿಳಿಸಿದರು. **ಬೃಹತ್ ಮಳೆನೀರು ಗಾಲುವೆ** ಸಂಬಂಧಿಸಿದಂತೆ ತುರ್ತು ಕಾಮಗಾರಿಗಳ ಬಗ್ಗೆ ಕೂಡಲೇ ಕ್ರಮ ವಹಿಸುವುದರ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಕ್ರಮ: ಸ.ಅ/ಸ.ಕಾ.ನಿ.ಅ (ಬೃಹತ್ ಮಳೆ ನೀರುಗಾಲುವೆ)

- <u>ಬೆಸ್ಕಾಂಗೆ ಸಂಬಂಧಿಸಿದ ವಿಷಯಗಳ ಬಗ್ಗೆ.</u>

ಬಾಗಲುಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ಹಲವಾರು ಕಡೆ ವಿದ್ಯುತ್ ಕಂಬಗಳು ಬಾಗಿರುತ್ತದೆ ಹಾಗೂ ಕೆಲವು ಕಡೆ ಮುರಿದು ಬೀಳುವ ಸ್ಥಿತಿಯಲ್ಲಿದ್ದು, ಈ ಕುರಿತು ಹಿಂದಿನ ಸಭೆಗಳಲ್ಲಿ ಚರ್ಚಿಸಲಾಗಿದ್ದರೂ ಈವರೆವಿಗೂ ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ವಾರ್ಡ್ ಸಮಿತಿ ಸದಸ್ಯರ ಸಭೆಯ ಗಮನಕ್ಕೆ ತಂದರು. ಈ ಕುರಿತ ಅಗತ್ಯ ಕ್ರಮ ಜರುಗಿಸುವಂತೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ತಿಳಿಸಲಾಯಿತು.

ಕ್ರಮ: ಸ.ಅ/ಸ.ಕಾ.ನಿ.ಅ (ವಿದ್ಯುತ್)

18/09/2021

**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14,**
**ಬಾಗಲಗುಂಟೆ**
**ಮತ್ತು ಕಾರ್ಯಪಾಲಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಪ್ರತಿಯನ್ನು:-

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಆರೋಗ್ಯ ವೈದ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
9) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
12) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಲ್ಯಾಣಾಧಿಕಾರಿಗಳು (ದಾ.ವ) ಬಿಬಿಎಂಪಿ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14) ಕಛೇರಿ ಪ್ರತಿ.